# <u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಶಹಬಾದ</u>

**CC No: 252/2019**

| | | |
|---|---|---|
| CW : 2 | | PW: 5 |
| ಹೆಸರು | : | ರವಿ ಪವಾರ್ |
| ತಂದೆಯ ಹೆಸರು | : | ಹೀರು |
| ವಯಸ್ಸು | : | 35 ವರ್ಷ |
| ಉದ್ಯೋಗ | : | ಕೂಲಿ |
| ಸ್ಥಳ | : | ಮಾಡಬೂಳ ತಾಂಡ,<br>ತಾ: ಚಿತ್ತಾಪೂರ |

**(ದಿನಾಂಕ: 20-06-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

**<u>ಮುಖ್ಯ ವಿಚಾರಣೆ: ಸ.ಸ.ಅ ವಕೀಲರಿಂದ</u>**

ಸಾಕ್ಷಿಗೆ ಜಪ್ತಿ ಹಾಗೂ ಸ್ಥಳ ಪಂಚನಾಮೆಗಳನ್ನು ತೋರಿಸಲಾಗಿ ಸಾಕ್ಷಿಯು ತಮ್ಮ ಸಹಿಗಳನ್ನು ನೋಡಿ ಗುರುತಿಸಿದ್ದು, ಜಪ್ತಿ ಪಂಚನಾಮೆಯನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2 (ಬಿ) ಎಂದು ಗುರುತಿಸಲಾಯಿತು. ಸ್ಥಳ ಪಂಚನಾಮೆಯನ್ನು ಈಗಾಗಲೇ ನಿ.ಪಿ.7 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.7 (ಬಿ) ಎಂದು ಗುರುತಿಸಲಾಗಿದೆ. ಸದರಿ ಸಹಿಗಳನ್ನು ಮೂರು ವರ್ಷಗಳ ಹಿಂದೆ ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಪೋಲೀಸರು ನನ್ನನ್ನು ಎಲ್ಲಿಯೂ ಕರೆಸಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಹಾಗೂ ಯಾವುದೇ ವಸ್ತುವನ್ನು ವಶಪಡಿಸಿಕೊಂಡಿರುವುದಿಲ್ಲ. ಪಂಚನಾಮೆಯಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿರುವುದಿಲ್ಲ. ಆರೋಪಿತನನ್ನು ನೋಡಿದರೆ ಗುರುತಿಸಲು ಆಗುವುದಿಲ್ಲ.

**(ಈ ಹಂತದಲ್ಲಿ ಸ.ಸ. ಅಭಿಯೋಜಕರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲಾಯಿತು)**

**<u>ಪಾಟೀ ಸವಾಲು: ಸ.ಸ. ಅಭಿಯೋಜಕರಿಂದ</u>**

ದಿನಾಂಕ: 08-12-2018 ರಂದು ಮಾಡಬೂಳ ಪೋಲೀಸರು ನನ್ನನ್ನು ಮತ್ತು ಚಾಸಾ-3 ರವರ ಸಮಕ್ಷಮ ರಾತ್ರಿ 07:00 ಗಂಟೆಯಿಂದ 08:00 ಗಂಟೆಯವರೆಗೆ ಹಾಗೂ ದಿಃ 09-12-2018 ರಂದು ಬೆಳಗ್ಗೆ 08:00 ಗಂಟೆಯಿಂದ 08:030 ಗಂಟೆವರೆಗೆ ಸ್ಥಳ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಒಂದು ಟ್ರಾಕ್ಟರನ್ನು ಜಪ್ತಿಪಸಿಡಿಕೊಂಡಿದ್ದಾರೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರಿಂದ</u>**

ಆರೋಪಿ ಪರ ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ಹೇಳುತ್ತಾರೆ.

**ಮರುವಿಚಾರಣೆ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೆ. ಸರಿ ಇದೆ.**

**-Sd-**

**ಸಿವಿಲ್ ನ್ಯಾಯಾಧೀಶರು, ಶಹಬಾದ.**